# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 288

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು)

ಉತ್ತರಿಸಬೇಕಾದ ದಿನಾಂಕ : 14.09.2021.

ಉತ್ತರಿಸುವವರು : ಗಣಿ ಮತ್ತು ಭೂ ವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕರ್ನಾಟಕ ರಾಜ್ಯದಲ್ಲಿ ಅಂಗವಿಕಲರ ಅನುದಾನಿತ ಶಾಲೆಗಳ ಶಿಕ್ಷಕರಿಗೆ ಹಾಗೂ ನೌಕರರಿಗೆ ಸರಿಯಾದ ಸಮಯಕ್ಕೆ ವೇತನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ | ಜಿಲ್ಲಾ ಪಂಚಾಯತ್ ಅನುದಾನದ ಮೂಲಕ 1982ರ ರಾಜ್ಯ ಅನುದಾನ ಸಂಹಿತೆಯಡಿ ನಡೆಯುತ್ತಿರುವ ವಿಶೇಷ ಶಾಲೆಗಳ ಶಿಕ್ಷಕರಿಗೆ ಹಾಗೂ ನೌಕರರಿಗೆ ಸರಿಯಾದ ಸಮಯಕ್ಕೆ ವೇತನ ದೊರಕದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಇದರಲ್ಲಿ 27 ವಿಶೇಷ ಶಾಲೆಗಳ ಹುದ್ದೆಗಳ ಮಂಜೂರಾತಿಗೆ ಈ ಹಿಂದೆ ಆರ್ಥಿಕ ಇಲಾಖೆಯಿಂದ ಸಹಮತಿ ಪಡೆದಿರುವುದಿಲ್ಲ.<br>ಮಾರ್ಚ್ 2021ರಿಂದ ಹೆಚ್.ಆರ್.ಎಮ್.ಎಸ್. ನಲ್ಲಿ ಸಿಬ್ಬಂದಿಗಳ ಮಾಹಿತಿಯನ್ನು ಅಳವಡಿಸಿದ್ದಲ್ಲಿ ಮಾತ್ರ ವೇತನ ಪಾವತಿಗೆ ಕ್ರಮವಹಿಸಲಾಗುವುದೆಂದು ಆರ್ಥಿಕ ಇಲಾಖೆಯವರು ಸೂಚಿಸಿದ್ದರಿಂದ ವೇತನ ಪಾವತಿಯಾಗಿರಲಿಲ್ಲ. ಈ ಸಂಬಂಧ ಮಾನ್ಯ ವಿಧಾನ ಪರಿಷತ್ತಿನ ಸಭಾಪತಿಯವರ ಅಧ್ಯಕ್ಷತೆಯಲ್ಲಿ ಸದರಿ ವಿಷಯದ ಬಗ್ಗೆ ಸಭೆ ನಡೆದಿದ್ದು, 27 ಶಾಲೆಗಳಲ್ಲಿನ ಹುದ್ದೆಗಳನ್ನು ಸಚಿವ ಸಂಪುಟದ ಅನುಮೋದನೆ ಪಡೆದ ನಂತರ ಹೆಚ್.ಆರ್.ಎಂ.ಎಸ್‌ನಲ್ಲಿ ಅಳವಡಿಸಲು ಬಹಳಷ್ಟು ಕಾಲಾವಕಾಶ ಬೇಕಾಗಿರುವುದರಿಂದ, ಶಿಕ್ಷಕ / ಶಿಕ್ಷಕೇತರ ಸಿಬ್ಬಂದಿಗಳ ಹಿತದೃಷ್ಟಿಯಿಂದ ಹಿಂದಿನ ಮಾದರಿಯಲ್ಲಿಯೇ ಕೆ2 ಮೂಲಕ ವೇತನ ಪಾವತಿಸಲು ಆರ್ಥಿಕ ಇಲಾಖೆಯು ಒಪ್ಪಿರುವುದರಿಂದ ನಿಗದಿತ ವೇಳೆಯಲ್ಲಿ ಪ್ರಸ್ತುತ ವೇತನ ಪಾವತಿಯಾಗುತ್ತಿದೆ. |
| ಆ | ಹಾಗೆಯೇ ನಿವೃತ್ತ ಶಿಕ್ಷಕರು ಹಾಗೂ ನೌಕರರಿಗೆ ಪಿಂಚಣಿಯೂ ಸರಿಯಾದ ಸಮಯಕ್ಕೆ ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | 1982ರ ರಾಜ್ಯ ಅನುದಾನ ಸಂಹಿತೆಯಡಿ ನಡೆಯುತ್ತಿರುವ 27 ವಿಶೇಷ ಶಾಲೆಗಳ ನಿವೃತ್ತ ಶಿಕ್ಷಕರು ಹಾಗೂ ನೌಕರರಿಗೆ ಪಿಂಚಣಿ ಸೌಲಭ್ಯ ನೀಡುವ ಕುರಿತು ಸೂಕ್ತ ಕ್ರಮ ಕೈಗೊಳ್ಳುವ ಸಲುವಾಗಿ ಸದರಿ ಶಾಲೆಗಳಲ್ಲಿನ ಹುದ್ದೆಗಳ ಮಂಜೂರಾತಿಗಾಗಿ ಆರ್ಥಿಕ ಇಲಾಖೆಯ ಸಹಮತಿ ಕೋರಿ ಈಗಾಗಲೇ ಕಡತವನ್ನು ಸಲ್ಲಿಸಲಾಗಿದೆ. ಆರ್ಥಿಕ ಇಲಾಖೆಯಿಂದ ಸಹಮತಿ ದೊರೆತ ನಂತರ ಪಿಂಚಣಿ ಸೌಲಭ್ಯವನ್ನು ನೀಡಲು ಕ್ರಮವಹಿಸಲಾಗುವುದು. |

(ಮಮಇ 179 ಪಿಹೆಚ್‌ಪಿ 2021)

(ಆಚಾರ್ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ ಹಾಗೂ ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ
ಹಿರಿಯ ನಾಗರಿಕರ ಸಬಲೀಕರಣ ಸಚಿವರು.
ವಿಕಲಚೇತನರ ಹಿರಿಯ ನಾಗರಿಕರ ಸಬಲೀಕರಣ